**08 ನವೆಂಬರ್ 2017**

**<u>ಸಿಂಧ್ ಕೋ-ಒಪರೇಟಿವ್ ಆರ್ಬನ್ ಬ್ಯಾಂಕ್ ಲಿಮಿಟೆಡ್ , ಹೈದರಾಬಾದ್ , ತೆಲಂಗಾಣ – ಇದಕ್ಕೆ ದಂಡನೆ</u>**

ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆ 1949 (ಸಹಕಾರ ಸಂಘಗಳಿಗನ್ವಯಿಸುವಂತೆ) ರ ಕಲಂ 47A (1) ಜೊತೆ ಪ್ರಕರಣ 46 (4) ರ ಅನ್ವಯ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆ 1949 ನಿಬಂಧನೆಯ ಬಹಿರಂಗತೆಯ ಮಾನದಂಡಗಳು ಹಾಗೂ ಶಾಸನಬದ್ಧತೆ/ ಇತರೆ ನಿಬಂಧನೆಗಳ ಉಲ್ಲಂಘನೆ ಕಾರಣಕ್ಕೆ ಸಿಂಧ್ ಕೋ-ಒಪರೇಟಿವ್ ಆರ್ಬನ್ ಬ್ಯಾಂಕ್ ಲಿಮಿಟೆಡ್ , ಹೈದರಾಬಾದ್ , ತೆಲಂಗಾಣ - ಇದಕ್ಕೆ ಭಾರತೀಯ ರಿಸರ್ವ್ ಬ್ಯಾಂಕ್ ರೂ 50 ಸಾವಿರ ದಂಡವನ್ನು ವಿಧಿಸಿದೆ.

ಭಾರತೀಯ ರಿಸರ್ವ್ ಬ್ಯಾಂಕ್ , ಮೇಲೆ ತಿಳಿಸಿದ ಬ್ಯಾಂಕಿಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಿದ್ದು, ಇದಕ್ಕೆ ಬ್ಯಾಂಕ್ ಲಿಖಿತ ಉತ್ತರ ನೀಡಿದೆ. ಪ್ರಕರಣದ ವಾಸ್ತವಾಂಶಗಳನ್ನು ಹಾಗೂ ಬ್ಯಾಂಕಿನ ಉತ್ತರವನ್ನು ಮತ್ತು ಖುದ್ದಾಗಿ ನೀಡಿದ ಹೇಳಿಕೆಯನ್ನು ಪರಿಶೀಲಿಸಿದ ತರುವಾಯ ಉಲ್ಲಂಘನೆಯು ಸಾಬೀತಾಗಿದೆಯೆಂದು ಪರಿಗಣಿಸಿ, ಬ್ಯಾಂಕು ದಂಡನಾರ್ಹವೆಂದು ಭಾರತೀಯ ರಿಸರ್ವ್ ಬ್ಯಾಂಕ್ ತೀರ್ಮಾನಿಸಿದೆ.

**ಅನಿರುಧ್ಧ ಡಿ ಜಾದವ್**
ಸಹಾಯಕ ವ್ಯವಸ್ಥಾಪಕರು

**ಪತ್ರಿಕಾ ಪ್ರಕಟಣೆ : 2017-2018/1276**